ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 29/10/2019

ಸವಿಗನ್ನಡ | ಗಡಿನಾಡ ಶಾಸಕನ ಕನ್ನಡ ಪ್ರೇಮ

# ಕನ್ನಡದಲ್ಲಿ ಪ್ರಮಾಣ ವಚನ ಸ್ವೀಕರಿಸಿದ ಕೇರಳದ ಶಾಸಕ



**ಕಾಸರಗೋಡು:** ಕೇರಳದ ಮಂಜೇಶ್ವರ ವಿಧಾನಸಭಾ ಕ್ಷೇತ್ರಕ್ಕೆ ಇತ್ತೀಚೆಗೆ ನಡೆದ ಉಪಚುನಾವಣೆಯಲ್ಲಿ ಆಯ್ಕೆಯಾಗಿದ್ದ ಯುಡಿಎಫ್ ಶಾಸಕ ಎಂ.ಸಿ.ಖಮರುದ್ದೀನ್, ಸೋಮವಾರ ಗೌಪ್ಯತೆಯ ಪ್ರಮಾಣ ವಚನ ಸ್ವೀಕರಿಸಿದರು. ವಿಶೇಷವೆಂದರೆ ಖಮರುದ್ದೀನ್ ಅವರು ಕನ್ನಡದಲ್ಲಿ ಪ್ರಮಾಣ ವಚನ ಸ್ವೀಕರಿಸುವ ಮೂಲಕ ಎಲ್ಲರ ಗಮನ ಸೆಳೆದರು. ಸೋಮವಾರ ತಿರುವನಂತಪುರಂನಲ್ಲಿರುವ ಕೇರಳ ವಿಧಾನಸಭೆಯಲ್ಲಿ, ಇತ್ತೀಚೆಗ ನಡೆದ ಉಪ ಚುನಾವಣೆಯಲ್ಲಿ ಗೆದ್ದ ನೂತನ ನಾಲ್ವರು ಶಾಸಕರೊಂದಿಗೆ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಮಂಜೇಶ್ವರ ಮುಸ್ಲಿಂ ಲೀಗ್ ಶಾಸಕರಾಗಿದ್ದ ಬಿಪಿ ಅಬ್ದುಲ್ ರಝಾಕ್ ನಿಧನದಿಂದ ತೆರವಾಗಿದ್ದ ಸ್ಥಾನಕ್ಕೆ ಅ.21 ರಂದು ಉಪಚುನಾವಣೆ ನಡೆದಿತ್ತು. ತಮ್ಮ ಸಮೀಪದ ಪ್ರತಿಸ್ಪರ್ಧಿ ಬಿಜೆಪಿಯ ರವೀಶ್ ತಂತ್ರಿಯನ್ನು 7,923 ಮತಗಳ ಅಂತರದಿಂದ ಸೋಲಿಸಿದ್ದರು. ತುಳು ಹಾಗೂ ಕನ್ನಡ ಭಾಷಿಗರು ಹೆಚ್ಚಾಗಿರುವುದರಿಂದ ಭಾಷಾ ವಿಚಾರ ಕೂಡ ಚುನಾವಣೆಯಲ್ಲಿ ಭಾರಿ ಸದ್ದು ಮಾಡಿತ್ತು. ಕಳೆದ ಬಾರಿ ರಝಾಕ್ ಕೇವಲ 89 ಮತಗಳ ಅಂತರದಿಂದ ಗೆದ್ದಿದ್ದರು.